# <u>ಕರ್ನಾಟಕ ವಿಧಾನ ಪರಿಷತ್ತು</u>

**ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಎಂ.ನಾಗರಾಜು ರವರ ನಿಯಮ-72ರ ಅಡಿ ಗಮನ ಸೆಳೆಯುವ ಸೂಚನೆಗೆ ಉತ್ತರ.**

**<u>ಸೂಚನೆ:-</u>**

ಕರ್ನಾಟಕ ರಾಜ್ಯದ ಕಾಡುಗೊಲ್ಲ ಸಮುದಾಯವನ್ನು ಪರಿಶಿಷ್ಟ ಪಂಗಡ ವರ್ಗಕ್ಕೆ ಸೇರಿಸುವ ಬಗ್ಗೆ ಕಳೆದ 8 ತಿಂಗಳ ಹಿಂದೆ ಸರ್ಕಾರದಿಂದ ಹಿಂದಿರುಗಿಸಲಾದ ಕಡತದಲ್ಲಿ ನ್ಯೂನತೆಗಳನ್ನು ಸರಿಪಡಿಸಿ ಶಿಫಾರಸ್ಸುಗಳೊಂದಿಗೆ ಕೇಂದ್ರ ಸರ್ಕಾರಕ್ಕೆ ಸಲ್ಲಿಸದೇ ಇರುವ ಕುರಿತು ನಿಯಮ-72ರಲ್ಲಿ ಮಾನ್ಯ ಪರಿಶಿಷ್ಟ ಪಂಗಡಗಳ ಕಲ್ಯಾಣ ಇಲಾಖೆ (ಮಾನ್ಯ ಮುಖ್ಯಮಂತ್ರಿಯವರು) ಸಚಿವರ ಗಮನ ಸೆಳೆಯ ಬಯಸುತ್ತೇನೆ.

**<u>ಉತ್ತರ:-</u>**

ಕರ್ನಾಟಕ ರಾಜ್ಯದಲ್ಲಿನ ಕಾಡುಗೊಲ್ಲ ಸಮುದಾಯವನ್ನು ಪರಿಶಿಷ್ಟ ಪಂಗಡದ ಪಟ್ಟಿಗೆ ಸೇರ್ಪಡೆ ಮಾಡುವ ಕುರಿತು ಕೇಂದ್ರ ಸರ್ಕಾರಕ್ಕೆ ಶಿಫಾರಸ್ಸು ಮಾಡಲಾಗಿದ್ದ ವರದಿಯನ್ನು ಕೇಂದ್ರ ಸರ್ಕಾರದ ರಿಜಿಸ್ಟ್ರಾರ್ ಜನರಲ್ ಆಫ್ ಇಂಡಿಯಾ, ನವದೆಹಲಿ ರವರು ದಿನಾಂಕ:27-03-2024ರ ಪತ್ರದಲ್ಲಿ ವ್ಯಕ್ತಪಡಿಸಿರುವ ಕೆಲವು ಅಂಶಗಳಿಗೆ ಸ್ಪಷ್ಟೀಕರಣ ಕೇಳಿದ್ದರು. ಅದರಂತೆ ಹೆಚ್ಚುವರಿ ಮಾಹಿತಿಯನ್ನು ಸೂಕ್ತ ಸಮರ್ಥನೆ/ಅಭಿಪ್ರಾಯದೊಂದಿಗೆ ವರದಿ ಸಲ್ಲಿಸುವಂತೆ ನಿರ್ದೇಶಕರು, ಕರ್ನಾಟಕ ರಾಜ್ಯ ಬುಡಕಟ್ಟು ಸಂಶೋಧನಾ ಸಂಸ್ಥೆ ಮೈಸೂರು ರವರನ್ನು ದಿನಾಂಕ:21.08.2024ರ ಪತ್ರದಲ್ಲಿ ಕೋರಲಾಗಿತ್ತು. ಕರ್ನಾಟಕ ರಾಜ್ಯ ಬುಡಕಟ್ಟು ಸಂಶೋಧನಾ ಸಂಸ್ಥೆ, ಮೈಸೂರು ರವರು ಪ್ರೊ. ಅನ್ನಪೂರ್ಣ ಎಂ. ನಿವೃತ್ತ ಪ್ರಾಧ್ಯಾಪಕರು, ಮಾನವಶಾಸ್ತ್ರ ವಿಭಾಗ, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು ರವರು ಇವರಿಂದ ಹೆಚ್ಚುವರಿ ಮಾಹಿತಿ/ಸ್ಪಷ್ಟೀಕರಣ ಪಡೆದು ದಿನಾಂಕ:11.11.2024ರ ಪತ್ರದಲ್ಲಿ ಸರ್ಕಾರಕ್ಕೆ ವರದಿ ಸಲ್ಲಿಸಿರುತ್ತಾರೆ.

ತದನಂತರ ಕಾಡುಗೊಲ್ಲ(ಅಡವಿಗೊಲ್ಲ) ಸಮುದಾಯವನ್ನು ಕರ್ನಾಟಕ ಪರಿಶಿಷ್ಟ ಪಂಗಡದ ಪಟ್ಟಿಗೆ ಸೇರ್ಪಡೆಗೊಳಿಸುವ ಸಂಬಂಧ ಸದರಿ ಅಭಿಪ್ರಾಯವನ್ನು ಮತ್ತೊಮ್ಮೆ ವಿವರವಾಗಿ ಪರಿಶೀಲಿಸಿ ಸ್ಪಷ್ಟವಾದ ವರದಿ ನೀಡುವಂತೆ ದಿನಾಂಕ:31.01.2025ರ ಪತ್ರದಲ್ಲಿ ನಿರ್ದೇಶಕರು, ಕರ್ನಾಟಕ ರಾಜ್ಯ ಬುಡಕಟ್ಟು ಸಂಶೋಧನಾ ಸಂಸ್ಥೆ ಮೈಸೂರು ರವರಿಗೆ ಸೂಚಿಸಲಾಗಿತ್ತು. ಅದರಂತೆ, ನಿರ್ದೇಶಕರು ಪ್ರಧಾನ ಸಂಶೋಧನಾಕಾರರಾದ ಪ್ರೊ. ಅನ್ನಪೂರ್ಣ ಎಂ. ನಿವೃತ್ತ ಪ್ರಾಧ್ಯಾಪಕರು, ಮಾನವಶಾಸ್ತ್ರ ವಿಭಾಗ, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು ರವರಿಂದ ವರದಿ ಪಡೆದು ದಿನಾಂಕ:07.03.2025ರಂದು ಸರ್ಕಾರಕ್ಕೆ ಸಲ್ಲಿಸಿರುತ್ತಾರೆ. ಪ್ರಸ್ತುತ ಸದರಿ ವರದಿಯು ಪರಿಶೀಲನಾ ಹಂತದಲ್ಲಿದೆ.

**STW/SECB/SAD/31/2025**

**(ಸಿದ್ದರಾಮಯ್ಯ)**
ಮುಖ್ಯಮಂತ್ರಿ